# ತುಮಕೂರು ವಿಶ್ವವಿದ್ಯಾನಿಲಯ
# ರಾಷ್ಟ್ರೀಯ ಸೇವಾ ಯೋಜನೆ

**ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು–572 103**

---

## 72ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಯ ಅಂಗವಾಗಿ ಗಿಡ ನೆಡುವ ಕಾರ್ಯಕ್ರಮ

**15ನೇ ಆಗಸ್ಟ್, 2018** **ಬೆಳಿಗ್ಗೆ 7.30ಕ್ಕೆ**

**ಡಾ.ಲೋಕೇಶ ಎಂ.ಯು**

ಕಾರ್ಯಕ್ರಮಸಂಯೋಜನಾಧಿಕಾರಿಗಳು

ರಾಷ್ಟ್ರೀಯ ಸೇವಾ ಯೋಜನೆ

ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು

# ತುಮಕೂರು ವಿಶ್ವವಿದ್ಯಾನಿಲಯ
## ರಾಷ್ಟ್ರೀಯ ಸೇವಾ ಯೋಜನೆ
ವಿಶ್ವವಿದ್ಯಾನಿಲಯ ಆವರಣ, ಬಿ.ಎಚ್. ರಸ್ತೆ, ತುಮಕೂರು–572 103

---

## ಕಾರ್ಯಕ್ರಮದ ಸಂಕ್ಷಿಪ್ತ ವರದಿ

ಕರ್ನಾಟಕ ಸರ್ಕಾರದ ಸನ್ಮಾನ್ಯ ಮುಖ್ಯಮಂತ್ರಿಗಳು 2018–19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ "ಹಸಿರು ಕರ್ನಾಟಕ" ಯೋಜನೆಯನ್ನು ಅನುಷ್ಠಾನಗೊಳಿಸಲು ಸಂಕಲ್ಪಿಸಿದ್ದು, ಈ ಹಿನ್ನೆಲೆಯಲ್ಲಿ ತುಮಕೂರು ವಿಶ್ವವಿದ್ಯಾನಿಲಯದ ರಾಷ್ಟ್ರೀಯ ಸೇವಾ ಯೋಜನೆಯ ವಿಭಾಗವು 72ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ಸಲುವಾಗಿ ಆಗಸ್ಟ್ 15ನೇ 2018 ರಂದು ವಿವಿಧ ರೀತಿಯ 72 ಗಿಡಗಳನ್ನು ನೆಡುವುದರ ಮುಖಾಂತರ ಸನ್ಮಾನ್ಯ ಕುಲಪತಿಗಳಾದ ಪ್ರೊ.ವೈ.ಎಸ್.ಸಿದ್ದೇಗೌಡರವರು ಹಸಿರು ವಿಶ್ವವಿದ್ಯಾನಿಲಯ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ತದನಂತರ ಮಾನ್ಯ ಕುಲಪತಿಗಳು ಮಾತನಾಡಿ ಹಸಿರು ಕರ್ನಾಟಕ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ತುಮಕುರು ವಿಶ್ವವಿದ್ಯಾನಿಲಯವು ಸದಾ ಮುಡುಪಾಗಿರುತ್ತದೆ. ಹಾಗೂ ಹಸಿರು ವಿಶ್ವವಿದ್ಯಾನಿಲಯ ಕಾರ್ಯಕ್ರಮದಂತಹ ಹೆಚ್ಚು ಹೆಚ್ಚು ಕಾರ್ಯಕ್ರಮಗಳನ್ನು ನಡೆಸಲು ನನ್ನ ಹಾಗೂ ವಿಶ್ವವಿದ್ಯಾನಿಲಯದ ಸಹಕಾರ ಇರುತ್ತದೆ ಎಂದು ತಿಳಿಸಿದರು.

**"ಹಸಿರು ಕರ್ನಾಟಕ ಯೋಜನೆಯಡಿ ಹಸಿರು ವಿಶ್ವವಿದ್ಯಾನಿಲಯಕ್ಕೆ ಚಾಲನೆ"**



**ಸನ್ಮಾನ್ಯ ಕುಲಪತಿಗಳಾದ ಪ್ರೊ.ವೈ.ಎಸ್.ಸಿದ್ದೇಗೌಡರವರು ಗಿಡವನ್ನು ನೆಡುವುದರ ಮುಖಾಂತರ ಹಸಿರು ವಿಶ್ವವಿದ್ಯಾನಿಲಯ ಕಾರ್ಯಕ್ರಮಕ್ಕೆ ಚಾಲನೆ ನೀಡುತ್ತಿರುವುದು.**

ತುಮಕೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು ಹಾಗೂ ಸ್ನಾತಕೋತ್ತರ ವಿಭಾಗಗಳ ಎನ್.ಎಸ್.ಎಸ್.ಘಟಕಗಳ ಮತ್ತು ಸಂಯೋಜಿತ ಕಾಲೇಜುಗಳ ಸುಮಾರು 200ಕ್ಕೂ ಹೆಚ್ಚು ಸ್ವಯಂಸೇವಕರು ಭಾಗವಹಿಸಿ ಗಿಡ ನೆಡುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ನೆಡಲಾಗಿರುವ 72 ಗಿಡಗಳ ಸಂರಕ್ಷಣೆಗಾಗಿ ಇಬ್ಬರು ಸ್ವಯಂಸೇವಕರು ಒಂದು ಗಿಡದ ಪೋಷಣೆಯಂತೆ, ಎಲ್ಲಾ ಗಿಡಗಳನ್ನು ಪೋಷಿಸುವ ಜವಾಬ್ದಾರಿಯನ್ನು ಎನ್.ಎಸ್.ಎಸ್.ಕಾರ್ಯಕ್ರಮ ಸಂಯೋಜನಾಧಿಕಾರಿಗಳಾದ ಡಾ.ಲೋಕೇಶ್ ಎಂ.ಯು. ರವರು ಸ್ವಯಂಸೇವಕರಿಗೆ ದತ್ತು ನೀಡುವ ಮೂಲಕ ವಹಿಸಿದರು.



**ಎನ್ ಎಸ್.ಎಸ್. ಸ್ವಯಂಸೇವಕರು ಗಿಡ ನೆಡುತ್ತಿರುವುದು.**

ಈ ವಿನೂತನ ಕಾರ್ಯಕ್ರಮಕ್ಕೆ ಕರ್ನಾಟಕ ಉಚ್ಛ ನ್ಯಾಯಾಲಯದ ವಕೀಲರು ಹಾಗೂ ಕರ್ನಾಟಕ ಬಾರ್ ಕೌನ್ಸಿಲ್ ಅಧ್ಯಕ್ಷರೂ ಆಗಿರುವ ಶ್ರೀಯುತ ಪದ್ಮ ಪ್ರಸಾದ್ ಹೆಗ್ಡೆಯವರು ವಿಶೇಷ ಅತಿಥಿಗಳಾಗಿ ಕಾರ್ಯಕ್ರಮದಲ್ಲಿ ಹಾಜರಿದ್ದರು, ತುಮಕೂರು ಜಿಲ್ಲೆ ಅರಣ್ಯ ಇಲಾಖೆಯ ವಲಯ ಅರಣ್ಯ ಅಧಿಕಾರಿಗಳಾದ ಶ್ರೀಯುತ ಮಹೇಶ್ ಮಾಲಗತ್ತಿಯವರು ಎನ್.ಎಸ್.ಎಸ್.ಸ್ವಯಂಸೇವಕರ ಜೊತೆಯಲ್ಲಿ ಸಸಿಗಳನ್ನು ನೆಟ್ಟು, ಸಸಿಗಳನ್ನು ಬೆಳೆಸುವುದರಿಂದ ಪ್ರಕೃತಿ ಹಾಗೂ ಮಾನವರಿಗೆ ಹಾಗೂ ಸಕಲ ಜೀವರಾಶಿಗಳಿಗೂ ಉಪಯುಕ್ತವಾಗುವ ಬಗ್ಗೆ ಅರಿವು ಮೂಡಿಸಿದರು.

ಈ ಕಾರ್ಯಕ್ರಮದಲ್ಲಿ ವಿಶ್ವವಿದ್ಯಾನಿಲಯದ ಕುಲಸಚಿವರಾದ ಪ್ರೊ.ಟಿ.ವಿ.ವೆಂಕಟೇಶ್, ಪರೀಕ್ಷಾಂಗ ಕುಲಸಚಿವರಾದ ಪ್ರೊ.ಕೆ.ಜಿ.ಸುರೇಶ್‌ರವರು, ಎನ್.ಎಸ್.ಎಸ್. ಕಾರ್ಯಕ್ರಮ ಸಂಯೋಜನಾಧಿಕಾರಿ ಡಾ.ಲೋಕೇಶ. ಎಂ.ಯು, ಎನ್.ಎಸ್.ಎಸ್. ಕಾರ್ಯಕ್ರಮ ಅಧಿಕಾರಿಗಳಾದ ಡಾ. ಶ್ರೀನಿವಾಸ್, ಡಾ.ಕೃಷ್ಣ ಮತ್ತು ಡಾ. ಹರೀಶ್, ಡಾ.ವನಜಾಕ್ಷಿ, ಡಾ. ಮೌನೇಶ್ ಶ್ರೀನಿವಾಸ್‌ರಾವ್, ಡಾ.ಚಿಕ್ಕಣ್ಣ ರವರು ಹಾಗೂ ಈ ಕಾರ್ಯಕ್ರಮದಲ್ಲಿ ವಿಶ್ವವಿದ್ಯಾನಿಲಯದ ಅಧ್ಯಾಪಕ, ಅಧ್ಯಾಪಕೇತರರು, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ಸ್ನಾತಕೋತ್ತರ ವಿಭಾಗಗಳಿಂದ ವಿದ್ಯಾರ್ಥಿಗಳು ಮತ್ತು ಬಸವೇಶ್ವರ ಕಾಲೇಜಿನ ಎನ್.ಎಸ್.ಎಸ್.ಸ್ವಯಂಸೇವಕರು ಭಾಗವಹಿಸಿ ಸಸಿ ನೆಡುವ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.




ತುಮಕೂರು ಜಿಲ್ಲೆ ಅರಣ್ಯ ಇಲಾಖೆಯ ವಲಯ ಅರಣ್ಯ ಅಧಿಕಾರಿಗಳಾದ ಶ್ರೀಯುತ ಮಹೇಶ್ ಮಾಲಗತ್ತಿಯವರು ರಾ.ಸೇ.ಯೋ ಕಾರ್ಯಕ್ರಮ ಸಂಯೋಜನಾಧಿಕಾರಿಗಳಾದ ಡಾ.ಲೋಕೇಶ ಎಂ.ಯು.ರವರು ಹಾಗೂ ರಾ.ಸೇ.ಯೋ.ಸ್ವಯಂಸೇವಕರು ಒಟ್ಟುಗೂಡಿ 72 ಗಿಡಗಳನ್ನು ನೆಟ್ಟು 72ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಯಶಸ್ವಿಗೊಳಿಸಿದರು.

ಡಾ.ಲೋಕೇಶ ಎಂ.ಯು
ಕಾರ್ಯಕ್ರಮ ಸಂಯೋಜನಾಧಿಕಾರಿಗಳು
ರಾಷ್ಟ್ರೀಯ ಸೇವಾ ಯೋಜನೆ
ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು